# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಚಾಲೆಂಜ್ ಫಂಡ್ ಯೋಜನೆಯಡಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ಮಂಜೂರಾದ ಮೊತ್ತದಲ್ಲಿ ಕಟಾವಣೆಯಾಗಿರುವ ಟಿಡಿಎಸ್ ಮೊತ್ತವನ್ನು ಸಂಬಂಧಪಟ್ಟ ಇಲಾಖೆ / ಸಂಸ್ಥೆಗಳಿಗೆ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 92 ಇಆಸು 2009, ದಿನಾಂಕ:08.07.2010.
2) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 118 ಇಆಸು 2015, ದಿನಾಂಕ: 15.02.2017 ಮತ್ತು ಸಿಆಸುಇ 120 ಇಆಸು 2017, ದಿನಾಂಕ: 26.03.2018 ರ ಮೂರು ಆದೇಶಗಳು
3) ದಿನಾಂಕ: 08.01.2019 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಚಾಲೆಂಜ್ ಫಂಡ್ ಯೋಜನೆಯ ಬಗ್ಗೆ ನಡೆದ ಸಭಾ ನಡವಳಿಗಳು.

## ಪ್ರಸ್ತಾವನೆ

ಮೇಲೆ ಓದಲಾದ (1)ರ ದಿನಾಂಕ: 08.07.2010ರ ಸರ್ಕಾರದ ಆದೇಶದಲ್ಲಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ಚಾಲೆಂಜ್ ಫಂಡ್ ಯೋಜನೆಯನ್ನು ಸ್ಥಾಪಿಸಲಾಗಿದೆ. ಈ ಯೋಜನೆಯಲ್ಲಿ ಗುಣಮಟ್ಟದ ಗುರಿಗಳನ್ನು ಸಾಧಿಸಲು ಪ್ರಯೋಗಾತ್ಮಕ/ ವಿನೂತನ ಯೋಜನೆಗಳನ್ನು ಅನುಷ್ಠಾನಗೊಳಿಸುವ ಸಲುವಾಗಿ ಅನುದಾನವನ್ನು ಬಿಡುಗಡೆ ಮಾಡಲು ಉದ್ದೇಶಿಸಿ ಪ್ರತಿ ವರ್ಷದ ಆಯವ್ಯಯದಲ್ಲಿ ಬೇಡಿಕೆಗನುಗುಣವಾಗಿ ಒಂದು ಮೊತ್ತದ ಅನುದಾನವನ್ನು ಹಂಚಿಕೆ ಮಾಡುವ ಕ್ರಮವಿರುತ್ತದೆ.

ಓದಲಾದ (3)ರ ಸರ್ಕಾರದ ಆದೇಶಗಳಲ್ಲಿ, ಉದ್ದೇಶಿತ ಯೋಜನೆಗಳಿಗೆ. i) ನಿರ್ದೇಶಕರು, ಧಾರವಾಡ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ, ಧಾರವಾಡ, ಇವರಿಗೆ ಸಂಸ್ಥೆಯ ಗ್ರಂಥಾಲಯದ ವೈದ್ಯಕೀಯ ದಾಖಲೆಗಳನ್ನು ಗಣಕೀಕರಿಸುವ ಯೋಜನೆಗೆ ರೂ. 13.10 ಲಕ್ಷ ಅನುದಾನ ಮಂಜೂರಾಗಿದ್ದು, 10% ಟಿಡಿಎಸ್ 1.31 ಲಕ್ಷ ಕಟಾಯಿಸಿ ರೂ.11.79 ಲಕ್ಷ ಅನುದಾನ ಬಿಡುಗಡೆ ಮಾಡಲಾಗಿದೆ. ii) ಮಹಾ ನಿರ್ದೇಶಕರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಬೆಂಗಳೂರು, ಇವರಿಗೆ ಕ್ರೀಡಾಪಟುಗಳ ಟ್ರಾಕಿಂಗ್ ವ್ಯವಸ್ಥೆ ಅಳವಡಿಸುವ ಯೋಜನೆಗೆ ರೂ.25.00 ಲಕ್ಷ ಅನುದಾನವನ್ನು ಮಂಜೂರು ಮಾಡಿದ್ದು ಇದರಲ್ಲಿ 10% ಟಿಡಿಎಸ್ ರೂ.2.50 ಲಕ್ಷ ಕಟಾಯಿಸಿ ರೂ.22.50 ಲಕ್ಷ ಅನುದಾನವ ಬಿಡುಗಡೆ ಮಾಡಲಾಗಿದೆ. iii). ನಿರ್ದೇಶಕರು ಮತ್ತು ಡೀನ್, ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿ, ಇವರಿಗೆ High Dependancy Unit ಮತ್ತು Obstetric Intensive Care Unit ಗಳನ್ನು ಸ್ಥಾಪಿಸಲು ರೂ.105.00 ಲಕ್ಷ ಅನುದಾನ ಮಂಜೂರು ಮಾಡಿದ್ದು 20% ಟಿಡಿಎಸ್ ರೂ. 21.00 ಲಕ್ಷ ಕಟಾಯಸಿ ರೂ.84.00 ಲಕ್ಷ ಅನುದಾನ ಬಿಡುಗಡೆ ಮಾಡಲಾಗಿದೆ. iv) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರಿಗೆ ಬೆಂಗಳೂರು, ರಾಯಚೂರು ಮತ್ತು ಬಾಗಲಕೋಟೆ ಜಿಲ್ಲೆಗಳ ಪಾಲಿಟೆಕ್ನಿಕ್ ಕಾಲೇಜುಗಳ ಕ್ರಿಯಾ ಯೋಜನೆಯನ್ನು ಕಾರ್ಯರೂಪಕ್ಕೆ

ತರಲು ರೂ.80.00 ಲಕ್ಷ ಅನುದಾನವನ್ನು ಮಂಜೂರು ಮಾಡಿದ್ದು 20% ಟಿಡಿಎಸ್ ರೂ. 16.00 ಲಕ್ಷ ಕಟಾಯಿಸಿ ಪ್ರತ್ಯೇಕವಾಗಿ, ಅ) ಬೆಂಗಳೂರಿಗೆ ರೂ. 25.00 ಲಕ್ಷ, ಇ) ರಾಯಚೂರಿಗೆ ರೂ.20.00 ಲಕ್ಷ ಮತ್ತು ಉ) ಬಾಗಲಕೋಟೆಗೆ ರೂ. 19.00 ಒಟ್ಟು ರೂ. 64.00 ಲಕ್ಷ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಓದಲಾದ (3)ರ ಪ್ರಸ್ತಾವನೆಯಲ್ಲಿ, ದಿನಾಂಕ: 08.01.2019ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಚಾಲೆಂಜ್ ಫಂಡ್ ಯೋಜನೆಗೆ ಸಂಬಂಧಿಸಿದ ಸಭೆಯಲ್ಲಿ, ಚಾಲೆಂಜ್ ಫಂಡ್ ಯೋಜನೆಗಳಿಗೆ ಸರ್ಕಾರದಿಂದ ಅನುದಾನ (grant-in-aid) ಬಿಡುಗಡೆ ಮಾಡುತ್ತಿದ್ದು ಟಿಡಿಎಸ್ ಕಳೆಯುವ ಅವಶ್ಯಕತೆ ಇಲ್ಲವೆಂದು ಅಭಿಪ್ರಾಯ ನೀಡಲಾಗಿದೆ.

ಸರ್ಕಾರದಿಂದ, ಸರ್ಕಾರದ ಇಲಾಖೆ / ಸಂಸ್ಥೆಗಳಿಗೆ ಚಾಲೆಂಜ್ ಫಂಡ್ ಯೋಜನೆಯಡಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ಬಿಡುಗಡೆಯಾಗುವ ಸಹಾಯಾನುದಾನ (grant in aid) ದಲ್ಲಿ ಹೆಚ್ಚಿನ ಮೊತ್ತದ ಟಿಡಿಎಸ್ ಕಟಾವಣೆಯಾಗಿದ್ದು ಅನುದಾನದ ಕೊರತೆಯಿಂದ ಉದ್ದೇಶಿತ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ವಿಳಂಬ / ರದ್ದಾಗುವ ಸಂಭವವಿರುವುದರಿಂದ ಕಟಾವಣೆಯಾಗಿರುವ ಟಿಡಿಎಸ್ ಮೊತ್ತವನ್ನು ಸಂಬಂಧಪಟ್ಟ ಇಲಾಖೆ / ಸಂಸ್ಥೆಗಳಿಗೆ ಬಿಡುಗಡೆ ಮಾಡಲು ಒಪ್ಪಲಾಗಿರುತ್ತದೆ.

ಅದರಂತೆ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಓಆಸುಇ 09 ಇಆಸು 2019**

**ಬೆಂಗಳೂರು, ದಿನಾಂಕ: 07.03.2019.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಸರ್ಕಾರದ ಚಾಲೆಂಜ್ ಫಂಡ್ ಯೋಜನೆಯಡಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ, ಅನುದಾನ ಬಿಡುಗಡೆ ಮಾಡಿರುವ ಕೆಳಕಂಡ ಇಲಾಖೆ / ಸಂಸ್ಥೆಗಳಿಗೆ ಕಟಾವಣೆಯಾಗಿರುವ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ.

1. ನಿರ್ದೇಶಕರು, ಧಾರವಾಡ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ, ಧಾರವಾಡ, ಇವರಿಗೆ ರೂ. 1.31 ಲಕ್ಷ (ಒಂದು ಲಕ್ಷದ ಮೂವತ್ತೊಂದು ಸಾವಿರ ರೂಪಾಯಿಗಳು).
2. ಮಹಾ ನಿರ್ದೇಶಕರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಬೆಂಗಳೂರು, ಇವರಿಗೆ ರೂ. 2.50 ಲಕ್ಷ (ಎರಡು ಲಕ್ಷದ ಐವತ್ತು ಸಾವಿರ ರೂಪಾಯಿಗಳು).
3. ನಿರ್ದೇಶಕರು ಮತ್ತು ಡೀನ್, ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿ ಇವರಿಗೆ ರೂ.21.00 ಲಕ್ಷ (ಇಪ್ಪತ್ತೊಂದು ಲಕ್ಷ ರೂಪಾಯಿಗಳು).
4. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರಿಗೆ ರೂ. 16.00 ಲಕ್ಷ (ಹದಿನಾರು ಲಕ್ಷ ರೂಪಾಯಿಗಳು).

ಸದರಿ ಅನುದಾನವನ್ನು ಕೆಳಕಾಣಿಸಿದ ಷರತ್ತಿಗೊಳಪಟ್ಟು 2018-19ರ ಸಾಲಿಗೆ ಮಂಜೂರು ಮಾಡಲಾಗಿದೆ.

2. ಯೋಜನೆ ನಿರ್ವಹಿಸುವ ಅಧಿಕಾರಿಯು ನಿಗದಿತ ಅವಧಿಯಲ್ಲಿ ಯೋಜನೆಯನ್ನು ಸಮರ್ಪಕವಾಗಿ ನಿರ್ವಹಿಸಿ ಅನುದಾನ ಬಳಕೆ ಪ್ರಮಾಣ ಪತ್ರವನ್ನು ಸಕಾಲದಲ್ಲಿ ತಪ್ಪದೇ ಒದಗಿಸುವುದು. ತಪ್ಪಿದಲ್ಲಿ ಬಿಡುಗಡೆಯಾದ ಅನುದಾನವನ್ನು ಸಂಚಿತವಾಗಿರುವ ಬಡ್ಡಿಯೊಂದಿಗೆ ಸರ್ಕಾರಕ್ಕೆ ಹಿಂದಿರುಗಿಸುವುದು.

3. ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2052-00-090-0-25-059 ಇತರೆ ಖರ್ಚುಗಳು ಆಡಳಿತ ಸುಧಾರಣೆ ಸವಾಲು ನಿಧಿ- ಅಡಿಯಲ್ಲಿ ಭರಿಸತಕ್ಕದ್ದು.

4. ಈ ಯೋಜನೆಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ (ಕೆ.ಟಿ.ಪಿ.ಪಿ.) ರನ್ವಯ ಕಾರ್ಯ ನಿರ್ವಹಿಸುವಂತೆ ಆದೇಶಿಸಿದೆ. ಯೋಜನೆ ಪೂರೈಸಿದ ನಂತರ ಅಧಿಕೃತ ಸಂಸ್ಥೆಯಿಂದ ಲೆಕ್ಕಪರಿಶೋಧನೆ (3rd party inspection) ಮಾಡಿಸಿ ವರದಿಯನ್ನು ಸಲ್ಲಿಸತಕ್ಕದ್ದು.

5. ಸದರಿ ಸಂಸ್ಥೆಗೆ ಸರ್ಕಾರದಿಂದ ಬಿಡುಗಡೆ ಮಾಡುವ ಮೊತ್ತವು ಸಹಾಯ ಅನುದಾನವಾಗಿದ್ದು (Grant in aid), ಇದು ಯಾವುದೇ ತೆರಿಗೆಗೆ ಒಳಪಡುವುದಿಲ್ಲ ಆದ್ದರಿಂದ ಯಾವುದೇ ತೆರಿಗೆಯನ್ನು ಕಟಾಯಿಸದೇ ಪೂರ್ಣ ಮೊತ್ತವನ್ನು ಬಿಡುಗಡೆ ಮಾಡಲು ಲೆಕ್ಕಪತ್ರ ಶಾಖೆಯು ಅಗತ್ಯ ಕ್ರಮ ವಹಿಸತಕ್ಕದ್ದು.

6. ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 04 ಟಿಎಫ್‌ಪಿ 2018, ದಿನಾಂಕ: 08.01.2019ರಲ್ಲಿ ಆಡಳಿತ ಇಲಾಖೆಗಳ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ,

ಸುಜಾತ ಹೆಚ್.ಎಸ್

(ಸುಜಾತ ಹೆಚ್.ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ-ತರಬೇತಿ)

ಪ್ರತಿ:

1. ಮಹಾಲೇಖಪಾಲರು ಕರ್ನಾಟಕ, (ಆಡಿಟ್ 1 ಮತ್ತು 2) (ಲೆಕ್ಕಪತ್ರ 1 ಮತ್ತು 2), ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಮಹಾ ನಿರ್ದೇಶಕರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಬೆಂಗಳೂರು
7. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
8. ನಿರ್ದೇಶಕರು, ಮತ್ತು ಡೀನ್, ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿ
9. ನಿರ್ದೇಶಕರು, ಧಾರವಾಡ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ, ಧಾರವಾಡ
10. ಯೋಜನಾ ನಿರ್ದೇಶಕರು, ಖಜಾನೆ-2, ವಾಣಿಜ್ಯ ತೆರಿಗೆಗಳ ಇಲಾಖೆ ಕಟ್ಟಡ, ಕಾಳಿದಾಸ ರಸ್ತೆ, ಗಾಂಧೀನಗರ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಲೆಕ್ಕಪತ್ರ-3)
12. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಕಾರ್ಯದರ್ಶಿ.
13. ಸರ್ಕಾರದ ಉಪ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು.
14. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

***